# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : | 1038(1291) |
| ಸದಸ್ಯರ ಹೆಸರು : | ಶ್ರೀ ಟಿ.ಎನ್. ಜವರಾಯಿ ಗೌಡ (ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ: | 13.03.2026 |
| ಉತ್ತರಿಸುವವರು : | ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು. |

******

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| (ಅ) | ರಾಜ್ಯದ ಗ್ರಾಮ ಪಂಚಾಯತಿಗಳಲ್ಲಿ ಇ-ಖಾತಾ ಸ್ಥಗಿತವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಇ-ಸ್ವತ್ತು 2.0 ತಂತ್ರಾಂಶದಡಿ ಸಾರ್ವಜನಿಕರಿಂದ ಇದುವರೆಗೆ ಒಟ್ಟು 1,38,470 ಅರ್ಜಿಗಳು ಸ್ವೀಕೃತವಾಗಿವೆ.<br>ಪ್ರಸ್ತುತ, 6,350 ಅರ್ಜಿಗಳು ಗ್ರಾಮ ಪಂಚಾಯತಿ ಕಾರ್ಯದರ್ಶಿಗಳ ಲಾಗಿನ್‌ನಲ್ಲಿ, 9,413 ಅರ್ಜಿಗಳು ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳ ಲಾಗಿನ್‌ನಲ್ಲಿ, 5,552 ಅರ್ಜಿಗಳು ಗ್ರಾಮ ಪಂಚಾಯತಿ ಅಧ್ಯಕ್ಷರ ಲಾಗಿನ್‌ನಲ್ಲಿ ಹಾಗೂ 1,112 ಅರ್ಜಿಗಳು ತಾಲ್ಲೂಕು ಪಂಚಾಯತಿಯ ಕಾರ್ಯನಿರ್ವಾಹಕ ಅಧಿಕಾರಿಗಳ ಲಾಗಿನ್‌ನಲ್ಲಿ ಅನುಮೋದನೆಗಾಗಿ ಬಾಕಿ ಇವೆ. ಈ ರೀತಿ, ವಿವಿಧ ಹಂತಗಳಲ್ಲಿ ಒಟ್ಟು 23,563 ಅರ್ಜಿಗಳು ಅನುಮೋದನೆಗಾಗಿ ಬಾಕಿ ಇರುತ್ತವೆ.<br>ಇದುವರೆಗೆ ಇ-ಸ್ವತ್ತು 2.0 ತಂತ್ರಾಂಶದಡಿ ಒಟ್ಟು 1,14,907 ಅರ್ಜಿಗಳು ಅನುಮೋದನೆಗೊಂಡು ವಿಲೇವಾರಿ ಮಾಡಲಾಗಿದೆ. |
| (ಆ) | ಬಂದಿದ್ದಲ್ಲಿ, ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ಹಾಗೂ ಇದಕ್ಕೆ ಕಾರಣಗಳೇನು; ವಿವರ ನೀಡುವುದು; | ಇ-ಸ್ವತ್ತು 2.0 ತಂತ್ರಾಂಶದ Citizen interface ನ ಮೂಲಕ ಅರ್ಜಿಗಳನ್ನು ಸಲ್ಲಿಸುವಲ್ಲಿ ಮತ್ತು ಬಳಕೆದಾರರು ಅರ್ಜಿಗಳನ್ನು ಅನುಮೋದನೆ ಮಾಡುವಂತಹ ಸಂದರ್ಭದಲ್ಲಿ ತಾಂತ್ರಿಕ ಸಮಸ್ಯೆಗಳು ಉಂಟಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆ.<br>ದಿನಾಂಕ:14.01.2026 ರಂದು ಮಾನ್ಯ ಸಚಿವರು, **Ministry of Electronics and Information Technology** (MeitY), ಭಾರತ ಸರ್ಕಾರ ರವರಿಗೆ ಇ-ಸ್ವತ್ತು 2.0 ತಂತ್ರಾಂಶದ ಸಮಸ್ಯೆಗಳನ್ನು ತ್ವರಿತವಾಗಿ ಬಗೆಹರಿಸಲು ಮತ್ತು ಉಳಿದ ಮಾಡ್ಯುಲ್ ಗಳನ್ನು ಆದ್ಯತೆ ಮೇರೆಗೆ ಅಭಿವೃದ್ಧಿಪಡಿಸಲು ಪತ್ರವನ್ನು ಬರೆಯಲಾಗಿತ್ತು.<br>ಇ-ಸ್ವತ್ತು 2.0 ತಂತ್ರಾಂಶದಲ್ಲಿ ಬದಲಾವಣೆ ಮಾಡಿ ಈ ಕೆಳಗಿನ ಸಮಸ್ಯೆಗಳನ್ನು ಬಗೆಹರಿಸಲಾಗಿದೆ.<br>1. ಇ-ಸ್ವತ್ತು ತಂತ್ರಾಂಶದ Citizen Interface ಮೂಲಕ ಅರ್ಜಿಗಳನ್ನು ಋಣಭಾರ ಪ್ರಮಾಣಪತ್ರ (Encumbrance Certificate – EC) |

| | | |
|---|---|---|
| | | ಗಳನ್ನು ಸಲ್ಲಿಸುವ ಉಂಟಾಗುತ್ತಿದ್ದ ತಾಂತ್ರಿಕ ಸಮಸ್ಯೆಗಳನ್ನು ಬರೆಹರಿಸಲಾಗಿದೆ.<br>2. ಇ-ಸ್ವತ್ತು ತಂತ್ರಾಂಶದ Citizen Interface ಮೂಲಕ ಅರ್ಜಿಗಳನ್ನು Save ಮಾಡಲು ಉಂಟಾಗುತ್ತಿದ್ದ ತಾಂತ್ರಿಕ ಸಮಸ್ಯೆಗಳನ್ನು ಬರೆಹರಿಸಲಾಗಿದೆ.<br>3. ಇ-ಸ್ವತ್ತು ತಂತ್ರಾಂಶದ Citizen Interface ಮೂಲಕ ಇ-ಖಾತಾಗಳನ್ನು download ಮಾಡಿಕೊಳ್ಳಲು ಇದ್ದ ತಾಂತ್ರಿಕ ಸಮಸ್ಯೆಗಳನ್ನು ಬರೆಹರಿಸಲಾಗಿದೆ.<br>4. ಇ-ಸ್ವತ್ತು ತಂತ್ರಾಂಶದ Citizen Interface ಮೂಲಕ ಅರ್ಜಿಗಳನ್ನು ಸಲ್ಲಿಸುವಾಗ ಎಲ್ಲಾ ವಿದ್ಯುತ್ ಸರಬರಾಜು ಕಂಪನಿ ಗಳೊಂದಿಗೆ ಮಾಡಲಾಗಿದ್ದ ಸಂಯೋಜನೆಯಲ್ಲಿ ಉಂಟಾಗುತ್ತಿದ್ದ ತಾಂತ್ರಿಕ ಸಮಸ್ಯೆಗಳನ್ನು ಬರೆಹರಿಸಲಾಗಿದೆ.<br>5. ಇ-ಸ್ವತ್ತು ತಂತ್ರಾಂಶದ ಗ್ರಾಮ ಪಂಚಾಯತಿ ಬಳಕೆದಾರರುಗಳ ಲಾಗಿನ್ ನಲ್ಲಿ ಅರ್ಜಿಗಳ ಅನುಮೋದನೆಯಲ್ಲಿ ಉಂಟಾಗುತ್ತಿದ್ದ ತಾಂತ್ರಿಕ ಸಮಸ್ಯೆಗಳನ್ನು ಬರೆಹರಿಸಲಾಗಿದೆ.<br>6. ಇ-ಸ್ವತ್ತು ತಂತ್ರಾಂಶದ Citizen Interface ಮೂಲಕ ಅರ್ಜಿಗಳನ್ನು ಸಲ್ಲಿಸುವಲ್ಲಿ ಗುಂಟೆ ಮತ್ತು Cents ನಲ್ಲಿರುವ ವಿಸ್ತೀರ್ಣವನ್ನು ಚ.ಮೀ ನಲ್ಲಿ ಪರಿವರ್ತಿಸಿ, ಅರ್ಜಿಗಳನ್ನು ಸಲ್ಲಿಸಲು ಅವಕಾಶ ನೀಡಲಾಗಿದೆ.<br>7. ಇ-ಸ್ವತ್ತು ತಂತ್ರಾಂಶದ Citizen Interface ಮೂಲಕ ಅರ್ಜಿಗಳನ್ನು ಸಲ್ಲಿಸುವಲ್ಲಿ ಉಂಟಾಗುತ್ತಿದ್ದ ತಾಂತ್ರಿಕ ಸಮಸ್ಯೆಗಳನ್ನು ಬಗೆಹರಿಸಲಾಗಿದೆ.<br>8. ಹೊಸ ಬಡಾವಣೆಗಳಿಗೆ ಅರ್ಜಿಗಳನ್ನು ಸಲ್ಲಿಸಲು ಗ್ರಾಮ ಪಂಚಾಯತಿ ಹಂತದಲ್ಲಿ ಅವಕಾಶ ನೀಡಲಾಗಿದೆ- ಈವರೆಗೆ 678 ಹೊಸ ಬಡಾವಣೆಗಳಿಗೆ ಅರ್ಜಿ ಸಲ್ಲಿಕೆಯಾಗಿದ್ದು, ಅವುಗಳಲ್ಲಿ 139 ಹೊಸ ಬಡಾವಣೆಗಳಿಗೆ ಗ್ರಾಮ ಪಂಚಾಯತಿ ಹಂತದಲ್ಲಿ ಅನುಮೋದನೆ ನೀಡಲಾಗಿದೆ.<br>9. ನಮೂನೆ–11ಬಿ ಖಾತೆಗಳನ್ನು ನಮೂನೆ–11ಎ ಗಳಾಗಿ ಪರಿವರ್ತನೆ ಮಾಡಿಕೊಳ್ಳಲು ಗ್ರಾಮ ಪಂಚಾಯತಿ ಹಂತದಲ್ಲಿ ಅವಕಾಶ ನೀಡಲಾಗಿದೆ.<br>10. ಹೊಸ ಬಹುಮಹಡಿ (ಅಪಾರ್ಟ್‌ಮೆಂಟ್) ಗಳಿಗೆ ಅರ್ಜಿಗಳನ್ನು ಸಲ್ಲಿಸಲು ಗ್ರಾಮ ಪಂಚಾಯತಿ ಹಂತದಲ್ಲಿ ಅವಕಾಶ ನೀಡಲಾಗಿದೆ.<br>11. ನಮೂನೆ–11ಬಿ ಖಾತೆಗಳನ್ನು ಅಪಾರ್ಟ್‌ಮೆಂಟ್ ಗಳಾಗಿ ಪರಿವರ್ತನೆ ಮಾಡಿಕೊಳ್ಳಲು ಗ್ರಾಮ ಪಂಚಾಯತಿ ಹಂತದಲ್ಲಿ ಅವಕಾಶ ನೀಡಲಾಗಿದೆ. |

| | | |
|---|---|---|
| | | ಹೊಸದಾಗಿ ಅನುಮೋದನೆಗೊಂಡ ಆಸ್ತಿಗಳಿಗೆ ತಿದ್ದುಪಡಿ ಮಾಡುವ ಅವಕಾಶವನ್ನು ಹಾಗೂ ನೋಂದಣಿ ಮತ್ತು ಮುದ್ರಾಂಕ ಇಲಾಖೆಯ ಮಾರ್ಗಸೂಚಿ ದರವನ್ನು ಇ-ಸ್ವತ್ತು ತಂತ್ರಾಂಶದೊಂದಿಗೆ ಸಂಯೋಜನೆ ಮಾಡುವ ಕಾರ್ಯವನ್ನು ಮುಂದಿನ 10 ದಿನದೊಳಗೆ ಕ್ರಮವಹಿಸಲಾಗುವುದು. ಇ-ಸ್ವತ್ತು ತಂತ್ರಾಂಶದ ಬಳಕೆದಾರರು ಗಳ ಲಾಗಿನ್ ನಲ್ಲಿ ಉಂಟಾಗುತ್ತಿರುವ ಸಣ್ಣ ಪುಟ್ಟ ತಾಂತ್ರಿಕ ಸಮಸ್ಯೆಗಳನ್ನು ತ್ವರಿತವಾಗಿ ಬಗೆಹರಿಸಲಾಗುವುದು. |
| ಇ) | 2025 ಡಿಸೆಂಬರ್‌ನಲ್ಲಿ ಆರಂಭಿಸಿರುವ ಈ ಯೋಜನೆಯು 2-3 ತಿಂಗಳಲ್ಲಿ ತಂತ್ರಾಂಶದ ಸಮಸ್ಯೆ ಎಂದು ಹೇಳುತ್ತಿರುವುದು ಸರಿಯೇ; ಹಾಗಿದ್ದಲ್ಲಿ, ಇ-ಖಾತಾ ನಿರ್ವಹಿಸುವ ಸಲುವಾಗಿ ಯಾವ ಸಾಫ್ಟ್‌ವೇರ್ ಕಂಪನಿಗೆ ಈ ಯೋಜನೆಯನ್ನು ವಹಿಸಲಾಗಿದ್ದು, ಆ ಕಂಪನಿಯ ಗುಣಮಟ್ಟವೇನು; ವಿವರವಾದ ಮಾಹಿತಿ ಒದಗಿಸುವುದು; | ಇ-ಸ್ವತ್ತು ತಂತ್ರಾಂಶವನ್ನು ಕೇಂದ್ರ ಸರ್ಕಾರದ ಅಧೀನದಲ್ಲಿರುವ ಎನ್.ಐ.ಸಿ ಸಂಸ್ಥೆಯಿಂದ ಅಭಿವೃದ್ಧಿಪಡಿಸಲಾಗಿದೆ. ದಿನಾಂಕ:14.01.2026 ರಂದು ಮಾನ್ಯ ಸಚಿವರು, **Ministry of Electronics and Information Technology** (MeitY), ಭಾರತ ಸರ್ಕಾರ ರವರಿಗೆ ಇ-ಸ್ವತ್ತು 2.0 ತಂತ್ರಾಂಶದ ಸಮಸ್ಯೆಗಳನ್ನು ತ್ವರಿತವಾಗಿ ಬಗೆಹರಿಸಲು ಮತ್ತು ಉಳಿದ ಮಾಡ್ಯುಲ್ ಗಳನ್ನು ಆದ್ಯತೆ ಮೇರೆಗೆ ಅಭಿವೃದ್ಧಿಪಡಿಸಲು ಪತ್ರವನ್ನು ಬರೆಯಲಾಗಿದೆ. |
| ಈ) | ಗ್ರಾಮೀಣ ಪ್ರದೇಶದಲ್ಲಿ ಬ್ಯಾಂಕ್ ಸಾಲ, ನೋಂದಣಿ, ಮ್ಯುಟೇಷನ್, ನಿರ್ಮಾಣ ಅಭಿವೃದ್ಧಿ ಕೆಲಸಗಳು ಕೈಗೊಳ್ಳದಿರುವುದರಿಂದ ಹಾಗೂ ಸರ್ಕಾರದ ಬೊಕ್ಕಸಕ್ಕೂ ನಷ್ಟವಾಗುತ್ತಿರುವುದರಿಂದ ತಂತ್ರಾಂಶದ ಸಮಸ್ಯೆ ಸರಿಹೋಗುವವರೆಗೂ ಹಳೆಯ ರೀತಿಯ "9 ಮತ್ತು 11ಎ" ಖಾತೆಯನ್ನು ಮುಂದುವರೆಸಲು ಸರ್ಕಾರಕ್ಕಿರುವ ಸಮಸ್ಯೆ ಏನು? (ಈ ಬಗ್ಗೆ ಮಾಹಿತಿ ನೀಡುವುದು); | ಈಗಾಗಲೇ ಹಲವಾರು ಸಮಸ್ಯೆಗಳನ್ನು ಬಗೆಹರಿಸಲಾಗಿದ್ದು, ಇ-ಸ್ವತ್ತು 2.0 ತಂತ್ರಾಂಶದಡಿ ಸಾರ್ವಜನಿಕರಿಂದ ಇದುವರೆಗೆ ಒಟ್ಟು 1,38,470 ಅರ್ಜಿಗಳು ಸ್ವೀಕೃತವಾಗಿ, ಇ-ಸ್ವತ್ತು 2.0 ತಂತ್ರಾಂಶದಡಿ ಒಟ್ಟು 1,14,907 ಅರ್ಜಿಗಳು ಅನುಮೋದನೆಗೊಂಡು ವಿಲೇವಾರಿ ಮಾಡಲಾಗಿದೆ. ಸಾರ್ವಜನಿಕರಿಗೆ ಅನುಕೂಲವಾಗುವಂತೆ ಇ-ಸ್ವತ್ತು ತಂತ್ರಾಂಶದಲ್ಲಿರುವ ತಾಂತ್ರಿಕ ಸಮಸ್ಯೆಗಳನ್ನು ಬಗೆಹರಿಸಿ, ಮತ್ತಷ್ಟು ಸರಳೀಕರಿಸಲು ಕ್ರಮವಹಿಸಲಾಗುತ್ತಿದೆ. |

ಸಂಖ್ಯೆ: ಗ್ರಾಅಪ/49/ಇ-ಆಡಳಿತ/2026

(ಪ್ರಿಯಾಂಕ್ ಖರ್ಗೆ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್
ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು
ಜೈವಿಕ ತಂತ್ರಜ್ಞಾನ ಸಚಿವರು.